All India Radio: Bangalore
National Bulletin In Kannada
23.10.2025 7.35 a.m.
ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

<><><><>

ಮುಖ್ಯಾಂಶಗಳು

೧. ರಾಷ್ಟ್ರವ್ಯಾಪಿ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ನಿಟ್ಟಿನಲ್ಲಿ ನವದೆಹಲಿಯಲ್ಲಿ ಮುಖ್ಯ ಚುನಾವಣಾ ಅಧಿಕಾರಿಗಳ ಸಮ್ಮೇಳನ

೨. ಆಪರೇಷನ್ ಸಿಂದೂರ; ಮೂರು ರಕ್ಷಣಾ ಪಡೆಗಳ ನಡುವೆ ಅಸಾಧಾರಣ ಸಮನ್ವಯತೆಗೆ ಸಾಕ್ಷಿ- ರಾಜನಾಥ್ ಸಿಂಗ್

೩. ಪಂಜಾಬ್ ನ್ಯಾಷನಲ್ ಬ್ಯಾಂಕ್ ವಂಚನೆ ಪ್ರಕರಣ: ಉದ್ಯಮಿ ಮೆಹುಲ್ ಚೋಕ್ಸಿ ಭಾರತಕ್ಕೆ ಹಸ್ತಾಂತರಿಸಲು ಬೆಲ್ಜಿಯಂ ನ್ಯಾಯಾಲಯ ಅನುಮೋದನೆ

೪. ಏಕದಿನ ಕ್ರಿಕೆಟ್: ಎರಡನೇ ಪಂದ್ಯದಲ್ಲಿಂದು ಭಾರತ-ಆಸ್ಟ್ರೇಲಿಯಾ ಮುಖಾಮುಖಿ

><><><><><

ಭಾರತೀಯ ಚುನಾವಣಾ ಆಯೋಗ ಆಯೋಜಿಸಿರುವ ಎರಡು ದಿನಗಳ ಮುಖ್ಯ ಚುನಾವಣಾ ಅಧಿಕಾರಿಗಳ ಸಮ್ಮೇಳನ ನಿನ್ನೆ ನವದೆಹಲಿಯ ಇಂಡಿಯಾ ಇಂಟರ್ನ್ಯಾಷನಲ್ ಇನ್ಸ್ಟಿಟ್ಯೂಟ್ ಫಾರ್ ಡೆಮಾಕ್ರಸಿ ಅಂಡ್ ಎಲೆಕ್ಟೋರಲ್ ಮ್ಯಾನೇಜ್ಮೆಂಟ್‌ನಲ್ಲಿ ಪ್ರಾರಂಭವಾಯಿತು. ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅಧ್ಯಕ್ಷತೆಯಲ್ಲಿ ನಡೆದ ಈ ಸಮ್ಮೇಳನದಲ್ಲಿ ಚುನಾವಣಾ ಆಯುಕ್ತರಾದ ಡಾ. ಸುಖ್ಬೀರ್ ಸಿಂಗ್ ಸಂಧು ಮತ್ತು ಡಾ. ವಿವೇಕ್ ಜೋಶಿ ಭಾಗವಹಿಸಿದ್ದರು. ಸಮ್ಮೇಳನದ

ಸಮಯದಲ್ಲಿ, ರಾಷ್ಟ್ರವ್ಯಾಪಿ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಕಾರ್ಯಾಚರಣೆಯಲ್ಲಿ ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಸಿಇಒಗಳಿಗೆ ಈ ಹಿಂದೆ ನೀಡಲಾದ ನಿರ್ದೇಶನಗಳ ಕುರಿತು ಸಾಧಿಸಿದ ಪ್ರಗತಿಯನ್ನು ಆಯೋಗ ಪರಿಶೀಲಿಸಿತು. ಕಳೆದ ತಿಂಗಳು ಆಯೋಜಿಸಲಾದ ಎಸ್‌ಐಆರ್ ಸನ್ನದ್ಧತೆ ಸಮ್ಮೇಳನದ ಅನುಸರಣೆಯಾಗಿ ಈ ಸಮ್ಮೇಳನವನ್ನು ನಡೆಸಲಾಗುತ್ತಿದೆ.

><><><><

ಬಿಹಾರ ಚುನಾವಣೆಯ ಮೊದಲ ಹಂತದ ಮತದಾನ ನವೆಂಬರ್ ೬ ರಂದು ನಿಗದಿಯಾಗಿದ್ದು, ಪ್ರಚಾರ ಕಾರ್ಯ ಭರದಿಂದ ಸಾಗಿದೆ ಎರಡನೇ ಹಂತದ ಚುನಾವಣೆಗೆ ನಾಮಪತ್ರಗಳನ್ನು ಹಿಂಪಡೆಯಲು ಇಂದು ಕೊನೆಯ ದಿನವಾಗಿದೆ. ಈ ಮಧ್ಯೆ ರಾಜಕೀಯ ಪಕ್ಷಗಳು ಮತದಾರರನ್ನು ಸೆಳೆಯಲು ಬಗೆಬಗೆ ಕಸರತ್ತು ನಡೆಸಿವೆ. ವಿವಿಧ ರಾಜಕೀಯ ಪಕ್ಷಗಳ ನೇತಾರರು ಚುನಾವಣಾ ರ್‍ಯಾಲಿಗಳಲ್ಲಿ ತೊಡಗಿದ್ದಾರೆ. ಜೆಡಿಯು ರಾಷ್ಟ್ರೀಯಾಧ್ಯಕ್ಷ ಮತ್ತು ಮುಖ್ಯಮಂತ್ರಿ ನಿತೀಶ್ ಕುಮಾರ್ ವಿವಿಧೆಡೆ ಪ್ರಚಾರ ನಡೆಸಿದರು. ಲೋಕಜನಶಕ್ತಿ ಪಕ್ಷದ ಅಧ್ಯಕ್ಷ ಚಿರಾಗ್ ಪಾಸ್ವಾನ್ ಖಗಾರಿಯಾದಲ್ಲಿ ಪ್ರಚಾರ ನಡೆಸಿದರು. ರಾಷ್ಟ್ರೀಯ ಜನತಾದಳ ಆರ್.ಜೆ.ಡಿ. ನಾಯಕ ತೇಜಸ್ವಿ ಯಾದವ್, ತಮ್ಮ ಪಕ್ಷ ಅಧಿಕಾರಕ್ಕೆ ಬಂದಲ್ಲಿ, ಎಲ್ಲಾ ಜೀವಿಕಾ ದೀದಿಯರಿಗೆ ಸರ್ಕಾರಿ ನೌಕರಿ ನೀಡುವುದಾಗಿ ಭರವಸೆ ನೀಡಿದರು. ಈ ಮಧ್ಯೆ ಬಿಜೆಪಿ ಈ ಭರವಸೆಯನ್ನು ಟೀಕಿಸಿದ್ದು, ಪ್ರಧಾನಮಂತ್ರಿ ನರೇಂದ್ರ ಮೋದಿ ಮತ್ತು ಮುಖ್ಯಮಂತ್ರಿ ನಿತೀಶ್‌ಕುಮಾರ್ ಅವರಿಂದಾಗಿ ಜೀವಿಕಾ ದೀದಿಯರಿಗೆ ಜೀವನದಲ್ಲಿ ಸಂತೋಷ ದೊರೆತಿದೆ ಎಂದು ಹೇಳಿದೆ. ಬಿಜೆಪಿ ಮೈತ್ರಿಕೂಟ ಅಧಿಕಾರಕ್ಕೆ ಬಂದಲ್ಲಿ ರಾಜ್ಯದಲ್ಲಿ ಅಭಿವೃದ್ಧಿಯ ವೇಗ ಇನ್ನಷ್ಟು ಹೆಚ್ಚಲಿದೆ ಎಂದು ಸಹ ಪಕ್ಷ ಹೇಳಿದೆ. ಹಿರಿಯ

ಕಾಂಗ್ರೆಸ್ ನಾಯಕ ಮತ್ತು ಪಕ್ಷದ ಚುನಾವಣಾ ವೀಕ್ಷಕ ಅಶೋಕ್ ಗೆಹ್ಲೋಟ್, ಮಹಾಮೈತ್ರಿ ಸಂಬಂಧ ಪಾಟ್ನಾದಲ್ಲಿ ಮಾತುಕತೆ ನಡೆಸಿದರು. ಚುನಾವಣಾ ಕಾರ್ಯತಂತ್ರ, ಪ್ರಚಾರ ತಂತ್ರ ಮತ್ತಿತರ ವಿಷಯಗಳ ಬಗ್ಗೆ ಎಲ್ಲಾ ಮೈತ್ರಿ ನಾಯಕರು ಇಂದು ತಮ್ಮ ತಮ್ಮ ನಿಲುವು ವ್ಯಕ್ತಪಡಿಸಲಿದ್ದಾರೆ ಎಂದು ಗೆಹ್ಲೋಟ್ ತಿಳಿಸಿದ್ದಾರೆ.

><><><><

ಆಪರೇಷನ್ ಸಿಂದೂರ-ಮೂರು ರಕ್ಷಣಾ ಪಡೆಗಳ ನಡುವೆ ಅಸಾಧಾರಣ ಸಮನ್ವಯತೆಗೆ ಸಾಕ್ಷಿಯಾಗಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ. ನವದೆಹಲಿಯಲ್ಲಿ ನಡೆದ ಪುಸ್ತಕ ಬಿಡುಗಡೆ ಸಮಾರಂಭದಲ್ಲಿ ಮಾತನಾಡಿದ ಅವರು, ಬದಲಾಗುತ್ತಿರುವ ವಿಶ್ವ ಕ್ರಮ ಮತ್ತು ವಿಕಸನಗೊಳ್ಳುತ್ತಿರುವ ಯುದ್ಧ ವಿಧಾನಗಳಿಂದ ಉಂಟಾಗುವ ಸವಾಲುಗಳನ್ನು ಎದುರಿಸಲು ಸಂಘಟಿತ, ಹೊಂದಾಣಿಕೆಯ ಮತ್ತು ಪೂರ್ವಭಾವಿ ರಕ್ಷಣಾ ಕಾರ್ಯತಂತ್ರಗಳನ್ನು ರೂಪಿಸುವ ಸರ್ಕಾರದ ಸಂಕಲ್ಪವನ್ನು ಇದು ಪುನರುಚ್ಚರಿಸಿದೆ ಎಂದು ಅವರು ಹೇಳಿದರು. ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ, ರಾಷ್ಟ್ರೀಯ ಭದ್ರತೆ ಮತ್ತು ದೇಶದ ಕಾರ್ಯತಂತ್ರದ ಸ್ವಾಯತ್ತತೆಯನ್ನು ಖಚಿತಪಡಿಸಿಕೊಳ್ಳಲು ಭವಿಷ್ಯಕ್ಕೆ ಸಿದ್ಧವಾಗಿರುವ ಸಶಸ್ತ್ರ ಪಡೆಗಳನ್ನು ನಿರ್ಮಿಸಲು ಹಲವಾರು ದಿಟ್ಟ ಮತ್ತು ನಿರ್ಣಾಯಕ ಸುಧಾರಣೆಗಳನ್ನು ಕೈಗೊಂಡಿದೆ ಎಂದು ಅವರು ಪ್ರತಿಪಾದಿಸಿದರು. ಆಪರೇಷನ್ ಸಿಂದೂರ ಸಮಯದಲ್ಲಿ ಜಂಟಿ ಮತ್ತು ಏಕೀಕರಣದ ಫಲಿತಾಂಶವನ್ನು ಇಡೀ ಜಗತ್ತು ಕಂಡಿದೆ. ನಮ್ಮ ಸಶಸ್ತ್ರ ಪಡೆಗಳು ನೀಡಿದ ತೀವ್ರ ಹೊಡೆತದಿಂದ ಪಾಕಿಸ್ತಾನ ಇನ್ನೂ ಚೇತರಿಸಿಕೊಳ್ಳುತ್ತಿದೆ ಎಂದು ಸಚಿವ ರಾಜನಾಥ್ ಸಿಂಗ್ ಹೇಳಿದರು.

><><><><

ಕೇರಳಕ್ಕೆ ನಾಲ್ಕು ದಿನಗಳ ಭೇಟಿ ನೀಡಿರುವ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಇಂದು ಕೇರಳದ ರಾಜಭವನದಲ್ಲಿ ಮಾಜಿ ರಾಷ್ಟ್ರಪತಿ ಕೆ.ಆರ್.ನಾರಾಯಣನ್ ಅವರ ಪ್ರತಿಮೆಯನ್ನು ಅನಾವರಣಗೊಳಿಸಲಿದ್ದಾರೆ. ನಂತರ, ರಾಷ್ಟ್ರಪತಿಯವರು, ತಿರುವನಂತಪುರಂ ಬಳಿಯ ವರ್ಕಲಾದ ಶಿವಗಿರಿ ಮಠದಲ್ಲಿ ಶ್ರೀ ನಾರಾಯಣ ಗುರು ಸಮಾಧಿಯ ಶತಮಾನೋತ್ಸವ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ. ಮಧ್ಯಾಹ್ನ, ಅವರು, ಪಾಲಾದ ಸೇಂಟ್ ಥಾಮಸ್ ಕಾಲೇಜಿನ ಅಮೃತ ಮಹೋತ್ಸವದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಲಿದ್ದಾರೆ.

><><><><

ಪಂಜಾಬ್ ನ್ಯಾಷನಲ್ ಬ್ಯಾಂಕ್‌ನಲ್ಲಿ ೧೩ ಸಾವಿರದ ೫೦೦ ಕೋಟಿ ರೂಪಾಯಿ ವಂಚನೆ ಪ್ರಕರಣಕ್ಕೆ ಸಂಬಂಧಿಸಿದಂತೆ ಪರಾರಿಯಾಗಿರುವ ಉದ್ಯಮಿ ಮೆಹುಲ್ ಚೋಕ್ಸಿಯನ್ನು ಭಾರತಕ್ಕೆ ಹಸ್ತಾಂತರಿಸಲು ಬೆಲ್ಜಿಯಂ ನ್ಯಾಯಾಲಯ ಅನುಮೋದನೆ ನೀಡಿದೆ. ಬಂಧನಕ್ಕೆ ಸಂಬಂಧಿಸಿದಂತೆ ಬೆಲ್ಜಿಯಂ ಅಧಿಕಾರಿಗಳು ಕಾನೂನುಬದ್ಧತೆಯನ್ನು ನ್ಯಾಯಾಲಯ ಎತ್ತಿಹಿಡಿದಿದ್ದು, ತಲೆಮರೆಸಿಕೊಂಡಿರುವ ಆಭರಣ ವ್ಯಾಪಾರಿಯನ್ನು ಹುಡುಕುವಲ್ಲಿ ಭಾರತ, ಪ್ರಮುಖ ಪ್ರಗತಿಯನ್ನು ದಾಖಲಿಸಿದೆ. ಆಂಟಿಗುವಾದಿಂದ ತಮ್ಮನ್ನು ಅಪಹರಿಸಲಾಗಿದೆ ಹಾಗೂ ಭಾರತದಲ್ಲಿ ರಾಜಕೀಯ ಕಿರುಕುಳ ಮತ್ತು ಅಮಾನವೀಯ ವರ್ತನೆಯ ಬೆದರಿಕೆಯನ್ನು ಎದುರಿಸಲಾಗಿದೆ ಎಂದು ಚೋಕ್ಸಿ ಪರ ವಕೀಲರು ನ್ಯಾಯಾಲಯದಲ್ಲಿ ವಾದಿಸಿದ್ದರು. ಆದರೆ ನ್ಯಾಯಾಲಯ, ಆ ಹಕ್ಕುಗಳನ್ನು ಬೆಂಬಲಿಸಲು ಯಾವುದೇ ದೃಢವಾದ ಪುರಾವೆಗಳನ್ನು ಇಲ್ಲದ ಕಾರಣ. ವಾದವನ್ನು ತಳ್ಳಿಹಾಕಿತು.

><><><><

ಇ-ಸ್ಪೋರ್ಟ್ಸ್ ಅಥವಾ ಸಾಮಾಜಿಕ ಆಟಗಳಾಗಿ ಕಾರ್ಯನಿರ್ವಹಿಸುವ ಆನ್‌ಲೈನ್ ಜೂಜಾಟ ಮತ್ತು ಬೆಟ್ಟಿಂಗ್ ವೇದಿಕೆಗಳನ್ನು ದೇಶಾದ್ಯಂತ ನಿಷೇಧಿಸಬೇಕೆಂದು ಕೋರಿ ಸಲ್ಲಿಸಲಾದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯ ಕುರಿತು ಸುಪ್ರೀಂ ಕೋರ್ಟ್, ಕೇಂದ್ರ ಸರ್ಕಾರದ ಸಹಾಯವನ್ನು ಕೋರಿದೆ. ಸೈಬರ್ ವಂಚನೆಗಳು, ವ್ಯಸನ, ಮಾನಸಿಕ ಆರೋಗ್ಯ ಅಸ್ವಸ್ಥತೆಗಳಿಗೆ ಕಾರಣವಾಗುವ ಇಂತಹ ಕಾನೂನುಬಾಹಿರ ಆಟಗಳಿಗೆ ಕ್ರಿಕೆಟಿಗರು ಮತ್ತು ಚಲನಚಿತ್ರ ತಾರೆಯರು ಉತ್ತೇಜನ ನೀಡುತ್ತಿದ್ದಾರೆ ಎಂದು ಅರ್ಜಿಯಲ್ಲಿ ಆರೋಪಿಸಲಾಗಿದೆ. ನೋಂದಾಯಿಸದ ಗೇಮಿಂಗ್ ಅಪ್ಲಿಕೇಶನ್‌ಗಳನ್ನು ಒಳಗೊಂಡ ಯಾವುದೇ ಹಣಕಾಸಿನ ವಹಿವಾಟುಗಳನ್ನು ಅನುಮತಿಸದಂತೆ ಭಾರತೀಯ ರಿಸರ್ವ್ ಬ್ಯಾಂಕ್, ಭಾರತೀಯ ರಾಷ್ಟ್ರೀಯ ಪಾವತಿ ನಿಗಮ ಮತ್ತು ಯುಪಿಐ ವೇದಿಕೆಗಳಿಗೆ ನಿರ್ದೇಶನಗಳನ್ನು ಕೋರಲಾಗಿದೆ. ಅದರ ಬಗ್ಗೆ ತೆರಿಗೆ ವಸೂಲಿ ಹಾಗೂ ತನಿಖೆ ನಡೆಸುವಂತೆ ಸಹ ಸೂಚಿಸಲಾಗಿದೆ.

><><><><><

ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್, ಆರ್ಥಿಕ ಮತ್ತು ವ್ಯಾಪಾರ ಪಾಲುದಾರಿಕೆ ಬಲವರ್ಧನೆಗೆ ಇಂದಿನಿಂದ ಜರ್ಮನಿಗೆ ಅಧಿಕೃತ ಪ್ರವಾಸ ಕೈಗೊಳ್ಳಲಿದ್ದಾರೆ. ೨೦೨೫ನೇ ವರ್ಷವು ಭಾರತ-ಜರ್ಮನಿ ಕಾರ್ಯತಂತ್ರದ ಪಾಲುದಾರಿಕೆಯ ೨೫ನೇ ವರ್ಷವಾಗಿರುವುದರಿಂದ ಈ ಭೇಟಿ ಮಹತ್ವ ಪಡೆದಿದೆ. ಸಚಿವರು ಜರ್ಮನಿಯ ಆರ್ಥಿಕ ವ್ಯವಹಾರಗಳು ಮತ್ತು ಇಂಧನ ಸಚಿವರೊಂದಿಗೆ ಉನ್ನತಮಟ್ಟದ ದ್ವಿಪಕ್ಷೀಯ ಸಭೆ ನಡೆಸಲಿದ್ದಾರೆ. ಭಾರತ-ಜರ್ಮನಿ ಆರ್ಥಿಕ ಪಾಲುದಾರಿಕೆ ಬಲವರ್ಧನೆಗೆ ಹಾಗೂ ವ್ಯಾಪಾರ ಮತ್ತು ಹೂಡಿಕೆ ಸಹಕಾರ ಉತ್ತೇಜನದ ಬಗ್ಗೆ ಚರ್ಚೆ ನಡೆಯಲಿದೆ ಎಂದು ವಾಣಜ್ಯ ಸಚಿವಾಲಯ ತಿಳಿಸಿದೆ. ಬರ್ಲಿನ್

ಜಾಗತಿಕ ಸಂವಾದ ಕಾರ್ಯಕ್ರಮದ ಮೂರನೇ ಆವೃತ್ತಿಯಲ್ಲಿ ಗೋಯಲ್ ಅವರು, ಭಾಷಣಕಾರರಾಗಿ ಪಾಲ್ಗೊಳ್ಳಲಿದ್ದಾರೆ. ವಿವಿಧ ಕಂಪನಿಗಳ ಮುಖ್ಯಸ್ಥರೊಂದಿಗೆ ಸರಣಿ ಸಭೆಗಳನ್ನು ನಡೆಸಲಿದ್ದಾರೆ. ಲಕ್ಸೆಂಬರ್ಗ್‌ನ ಉಪಪ್ರಧಾನಿಯವರೊಂದಿಗೂ ಗೋಯಲ್ ದ್ವಿಪಕ್ಷೀಯ ಸಭೆ ನಡೆಸಲಿದ್ದಾರೆ.

><><><><><

ಭಾರತದ ನವೀಕರಿಸಬಹುದಾದ ಇಂಧನ ಸಾಮರ್ಥ್ಯ ೨೦೧೪ರಲ್ಲಿ ೩೫ ಗಿಗಾವ್ಯಾಟ್‌ಗಳಿಷ್ಟಿದ್ದು, ಈಗ ೫ ಪಟ್ಟು ಹೆಚ್ಚಾಗಿ ೧೯೭ ಗಿಗಾವ್ಯಾಟ್‌ಗೆ ಏರಿಕೆಯಾಗಿದ್ದು, ಗಣನೀಯ ಪ್ರಗತಿ ಸಾಧಿಸಿದೆ. ಬೃಹತ್ ಜಲವಿದ್ಯುದಾಗರಗಳಿಂದ ಉತ್ಪಾದಿಸಲಾದ ಇಂಧನ ಇದರಡಿ ಸೇರಿಲ್ಲ. ೨೦೩೦ ರ ವೇಳೆಗೆ ಪಳೆಯುಳಿಕೆ ರಹಿತ ಇಂಧನ ಸಾಮರ್ಥ್ಯವನ್ನು ೫೦೦ ಗಿಗಾವ್ಯಾಟ್‌ಗಳಿಗೆ ಹೆಚ್ಚಿಸುವ ಗುರಿ ಹೊಂದಲಾಗಿದೆ ಎಂದು ನವ ಮತ್ತು ನವೀಕರಿಸಬಹುದಾದ ಇಂಧನ ಸಚಿವಾಲಯ ತಿಳಿಸಿದೆ. ಈ ವಲಯದಲ್ಲಿ ದೇಶವು ಅಭೂತಪೂರ್ವ ವಿಸ್ತರಣೆಯನ್ನು ಕ್ಷಿಪ್ರವಾಗಿ ಹೊಂದುತ್ತಿದ್ದು, ಈ ವರ್ಷ ಕೇಂದ್ರ ನವೀಕರಿಸಬಹುದಾದ ಇಂಧನ ಅನುಷ್ಠಾನ ಏಜೆನ್ಸಿಗಳು ೫.೭ ಗಿಗಾವ್ಯಾಟ್‌ಗಳಿಗೆ ಬಿಡ್ ಮಾಡಿದ್ದು, ರಾಜ್ಯ ಸಂಸ್ಥೆಗಳು ೩.೫ ಮೆಗಾವ್ಯಾಟ್‌ಗಳಿಗೆ ಬಿಡ್ ಮಾಡಿದೆ ಎಂದು ಸಚಿವಾಲಯ ಅಂಕಿ-ಅಂಶ ನೀಡಿದೆ.

><><><><><

ಆಸ್ಟ್ರೇಲಿಯಾದ ಅಡಿಲೇಡ್‌ನಲ್ಲಿ ಇಂದು ನಡೆಯುವ ಮೂರು ಪಂದ್ಯಗಳ ಏಕದಿನ ಕ್ರಿಕೆಟ್ ಸರಣಿಯ ಎರಡನೇ ಪಂದ್ಯದಲ್ಲಿ ಭಾರತ ತಂಡ, ಆತಿಥೇಯ ಆಸ್ಟ್ರೇಲಿಯಾ ತಂಡವನ್ನು ಎದುರಿಸಲಿದೆ. ಈ

ಪಂದ್ಯ ಭಾರತೀಯ ಕಾಲಮಾನ ಬೆಳಗ್ಗೆ ೯ ಗಂಟೆಗೆ ಆರಂಭವಾಗಲಿದೆ. ಭಾರತಕ್ಕೆ ಇದು ಗೆಲ್ಲಲೇಬೇಕಾದ ಪಂದ್ಯವಾಗಿದೆ, ಸೋತರೆ ಸರಣಿಯನ್ನು ಕಳೆದುಕೊಳ್ಳಬೇಕಾಗುತ್ತದೆ.

><><><><

ಇಂದೋರ್‌ನ ಹೋಳ್ಕರ್ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಐಸಿಸಿ ಮಹಿಳಾ ಏಕದಿನ ವಿಶ್ವಕಪ್ ಕ್ರಿಕೆಟ್ ಪಂದ್ಯದಲ್ಲಿ ಇಂಗ್ಲೆಂಡ್ ವಿರುದ್ಧ ಆಸ್ಟ್ರೇಲಿಯಾ ೭ ವಿಕೆಟ್‌ಗಳಿಂದ ಭರ್ಜರಿ ಜಯ ಸಾಧಿಸಿದೆ. ಮೊದಲು ಬ್ಯಾಟ್ ಮಾಡಿದ ಇಂಗ್ಲೆಂಡ್ ತಂಡ ನಿಗದಿತ ೫೦ ಓವರ್‌ಗಳಲ್ಲಿ ೯ ವಿಕೆಟ್ ನಷ್ಟಕ್ಕೆ ೧೪೪ ರನ್ ಗಳಿಸಿತು. ಈ ಗುರಿಯನ್ನು ಬೆನ್ನತ್ತಿದ ಆಸ್ಟ್ರೇಲಿಯಾ, ೪೦.೩ ಓವರ್‌ಗಳಲ್ಲಿ ೪ ವಿಕೆಟ್ ನಷ್ಟಕ್ಕೆ ೧೪೮ ರನ್ ಗಳಿಸಿ, ಗೆಲುವಿನ ನಗೆ ಬೀರಿತು.

><><><><